# ಕರ್ನಾಟಕ ಸರಕಾರ
## ಉಪ ನಿರ್ದೇಶಕರ ಕಾರ್ಯಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ.

ಸಂ:ಉನಿಧಾ/ಮಮಅಇ/ಅಂಕಾ/ಅ.ಸ/ನೇಮಕಾತಿ/2021-22

ದಿನಾಂಕ:28.06.2021.

**: ಅಧಿಸೂಚನೆ :**

ಸರ್ಕಾರದ ಆದೇಶ ಸಂಖ್ಯೆ/ಮಮಇ/303/ಐಸಿಡಿ/2017/ದಿನಾಂಕ:23-09-2017 ರ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿ ನೇಮಕಾತಿಯ ಪರಿಷ್ಕೃತ ಮಾರ್ಗಸೂಚಿಯಂತೆ ಹಾಗೂ ಮಾನ್ಯ ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ ಇವರ ಅನುಮೋದನೆಯಂತೆ, ಧಾರವಾಡ ಜಿಲ್ಲೆಯ 6 ಶಿಶು ಅಭಿವೃದ್ಧಿ ಯೋಜನೆಗಳಲ್ಲಿ ಖಾಲಿ ಇರುವ 20 ಅಂಗನವಾಡಿ ಕಾರ್ಯಕರ್ತೆ (ಅನುಬಂಧ-1ರಲ್ಲಿ) ಮತ್ತು 73 ಅಂಗನವಾಡಿ ಸಹಾಯಕಿ (ಅನುಬಂಧ-2 ರಲ್ಲಿ) ಗೌರವ ಸೇವೆಯ ಹುದ್ದೆಗಳನ್ನು ಭರ್ತಿ ಮಾಡಲು ಆನ್‌ಲೈನ್ (ವೆಬ್‌ಸೈಟ್ ವಿಳಾಸ:www.anganwadirecruit.kar.nic.in) ಮೂಲಕ ಪ್ರಕಟಿಸಿದ ಮಾರ್ಗಸೂಚಿ/ ನಿಬಂಧನೆಗಳಲ್ಲಿ ತಿಳಿಸಿರುವಂತೆ ಅರ್ಹ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಾರಂಭದ ದಿನಾಂಕ: 01-07-2021 ಆಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 31-07-2021 ಇರುತ್ತದೆ.

**ಸೂಚನೆಗಳು:**

1. ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿ ಹುದ್ದೆಗಳಿಗೆ ಅರ್ಜಿಗಳನ್ನು ಆನ್‌ಲೈನ್ (Online) ಮೂಲಕವೇ ಮಾತ್ರ ಸಲ್ಲಿಸತಕ್ಕದ್ದು, ಅರ್ಜಿಗಳನ್ನು ಅಂಚೆ ಅಥವಾ ಇತರೆ ಯಾವುದೇ ಮೂಲದಿಂದ ಸಲ್ಲಿಸಲು ಅವಕಾಶವಿರುವುದಿಲ್ಲ. ಅಂತಹ ಅರ್ಜಿಗಳು ಸ್ವೀಕೃತವಾದಲ್ಲಿ ಅವುಗಳನ್ನು ಪರಿಗಣಿಸಲಾಗುವುದಿಲ್ಲ.
2. ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಪೂರ್ವದಲ್ಲಿ ವೆಬ್‌ಸೈಟ್‌ನಲ್ಲಿ ಪ್ರಕಟಿತ ಈ ಕೆಳಗಿನ ನೇಮಕಾತಿಯ ಮಾರ್ಗಸೂಚಿ/ನಿಬಂಧನೆಗಳನ್ನು ಸ್ಪಷ್ಟವಾಗಿ ಓದಿಕೊಂಡು ನೀಡಲಾಗಿರುವ ಸೂಚನೆಯಂತೆ ಅರ್ಜಿಗಳನ್ನು ಭರ್ತಿ ಮಾಡಿ ಅವಶ್ಯಕ ಮೂಲ ದಾಖಲೆಗಳನ್ನು ಸರಿಯಾಗಿ ಕಾಣಿಸುವಂತೆ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಿ ಅರ್ಜಿ ಸಲ್ಲಿಸುವುದು.
3. ಆನ್‌ಲೈನ್ (Online) ಮೂಲಕವೇ ಅವಶ್ಯಕ ದಾಖಲಾತಿಗಳನ್ನು ಸಲ್ಲಿಸುವುದು, ತದನಂತರ ಸಲ್ಲಿಸುವ ದಾಖಲಾತಿಗಳನ್ನು ಪರಿಗಣಿಸಲಾಗುವುದಿಲ್ಲ.

**ಆನ್‌ಲೈನ್ ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲಾತಿಗಳು:**

1. ಅರ್ಜಿ ನಿಗಧಿತ ನಮೂನೆಯಲ್ಲಿ (ಆನ್‌ಲೈನ್) ಮೂಲಕ.
2. ಜನನ ಪ್ರಮಾಣ ಪತ್ರ/ಜನ್ಮ ದಿನಾಂಕ ಇರುವ ಶಾಲಾ ದಾಖಲಾತಿ/ಎಸ್.ಎಸ್.ಎಲ್.ಸಿ. ಅಂಕಪಟ್ಟಿ.
3. ನಿಗಧಿತ ವಿಧ್ಯಾರ್ಹತೆ ಅಂಕಪಟ್ಟಿ.
4. ಸಂಬಂಧಿಸಿದ ತಹಶೀಲ್ದಾರರು/ಉಪ ತಹಶೀಲ್ದಾರರಿಂದ ಪಡೆದ ಒಂದು (3) ವರ್ಷದೊಳಗಿನ ವಾಸಸ್ಥಳ ಧೃಢೀಕರಣ ಪತ್ರ.
5. ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರ.
6. ವಿಧವಾ ಅಭ್ಯರ್ಥಿಯಾದಲ್ಲಿ ಪತಿಯ ಮರಣ ಪ್ರಮಾಣ ಪತ್ರ. (ವಿಧವಾ ವೇತನ ಧೃಢೀಕರಣವನ್ನು ಪರಿಗಣಿಸುವುದಿಲ್ಲ)
7. ಆತ್ಮಹತ್ಯೆ ಮಾಡಿಕೊಂಡ ರೈತರ ಪತ್ನಿ ಎಂದು ಉಪ ವಿಭಾಗಾಧಿಕಾಗಳಿಂದ ಪಡೆದ ಪ್ರಮಾಣ ಪತ್ರ.
8. ಅಂಗವಿಕಲತೆ ಪ್ರಮಾಣ ಪತ್ರ (ಅಂಗವಿಕಲ ವೇತನ ಧೃಢೀಕರಣವನ್ನು ಪರಿಗಣಿಸುವಂತಿಲ್ಲ)
9. ವಿಚ್ಛೇದನಾ ಪ್ರಮಾಣ ಪತ್ರ (ನ್ಯಾಯಾಲಯದಿಂದ ಪಡೆದಿರಬೇಕು)

10. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ನಡೆಸಲ್ಪಟ್ಟ ಮಾಜಿ ದೇವದಾಸಿಯರ ಸಮೀಕ್ಷೆಯ ಪಟ್ಟಿಯಲ್ಲಿರುವ ಮಾಜಿ ದೇವದಾಸಿಯರ ಮಕ್ಕಳು ಎಂಬುದರ ಬಗ್ಗೆ ಸಂಬಂಧಿಸಿದ ಮಹಿಳಾ ಅಭಿವೃದ್ಧಿ ನಿಗಮದ ಅಧಿಕಾರಿಗಳಿಂದ ನೀಡಿದ ಪ್ರಮಾಣ ಪತ್ರ.
11. ಪರಿತ್ಯಕ್ತೆ ಎಂಬ ಬಗ್ಗೆ ಗ್ರಾಮ ಪಂಚಾಯತ್‌ನಿಂದ ಪಡೆದ ಪ್ರಮಾಣ ಪತ್ರ.
12. ಇಲಾಖೆಯ ಸುಧಾರಣಾ ಸಂಸ್ಥೆ/ರಾಜ್ಯ ಮಹಿಳಾ ನಿಲಯಗಳ ನಿವಾಸಿ ಎಂಬ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ.
13. ಯೋಜನಾ ನಿರಾಶ್ರಿತರೆಂಬ ಬಗ್ಗೆ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ.

ಉಪ ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
ಧಾರವಾಡ ಜಿಲ್ಲೆ, ಧಾರವಾಡ

ಪ್ರತಿಯನ್ನು:

1. ಮಾನ್ಯ ಜಿಲ್ಲಾಧಿಕಾರಿಗಳು, ಧಾರವಾಡರವರ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ಧಾರವಾಡ ಇವರಿಗೆ ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಿದೆ.
3. ಕಾರ್ಯ ನಿರ್ವಾಹಕ ಅಧಿಕಾರಿಗಳು, ಧಾರವಾಡ/ಹುಬ್ಬಳ್ಳಿ/ನವಲಗುಂದ/ಕುಂದಗೋಳ/ಕಲಘಟಗಿ.
4. ಶಿಶು ಅಭಿವೃದ್ದಿ ಯೋಜನಾಧಿಕಾರಿಗಳು, ಧಾರವಾಡ(ಗ್ರಾ)/ಹುಬ್ಬಳ್ಳಿ(ಗ್ರಾ) /ಹುಬ್ಬಳ್ಳಿ-ಧಾರವಾಡ(ಶ)/ ನವಲಗುಂದ/ಕುಂದಗೋಳ/ಕಲಘಟಗಿ.
5. ಸಂಬಂಧಿಸಿದ ತಾಲೂಕು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಮೂಲಕ.
6. ಸಂಬಂಧಿಸಿದ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಮೂಲಕ.
7. ಸಂಬಂಧಿಸಿದ ಗ್ರಾಮ ಪಂಚಾಯತಿ/ನಗರಸಭೆ ಪ್ರಕಟಣೆಗಾಗಿ, ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಮೂಲಕ.
8. ಸಂಬಂಧಿಸಿದ ಶಾಲಾ ಮುಖ್ಯೋಪಾದ್ಯಾಯರು,ಹಿರಿಯ/ಕಿರಿಯ ಪ್ರಾಥಮಿಕ ಶಾಲೆ-----ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಮೂಲಕ.
9. ಸಂಬಂಧಿಸಿದ ಕೃಷಿ ಸಂಪರ್ಕ ಕೇಂದ್ರ/ಗ್ಯಾಮ ಆರೋಗ್ಯ ಕೇಂದ್ರ/ಗ್ರಾಮ ಲೆಕ್ಕಾಧಿಕಾರಿಗಳ ಕಛೇರಿ/ ಅಂಗನವಾಡಿ ಕೇಂದ್ರಗಳಲ್ಲಿ ಪ್ರಕಟಣಣೆಗಾಗಿ. ಶಿಶು ಅಭಿವೃದ್ದಿ ಯೋಜನಾಧಿಕಾರಿಗಳ ಮೂಲಕ.
10. ಕಛೇರಿ ಕಡತಕ್ಕೆ.